## ಕರ್ನಾಟಕ ಸರ್ಕಾರ

ಸಂಖ್ಯೆ :KPRC-DEV0CCM/3/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ:05.10.2020.

## ಸುತ್ತೋಲೆ

**ವಿಷಯ**: ಗ್ರಾಮ ಪಂಚಾಯಿತಿ ಗ್ರಂಥಾಲಯಗಳ ದಿನಪತ್ರಿಕೆ, ನಿಯತಕಾಲಿಕೆಗಳ ವೆಚ್ಚ ಭರಿಸುವ ಬಗ್ಗೆ.

***

ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಎಲ್‌ಐಬಿ 2015, ದಿನಾಂಕ:26.07.2019ರನ್ವಯ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿದ್ದ 5633 ಗ್ರಂಥಾಲಯಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗ್ರಾಮ ಪಂಚಾಯಿತಿಗಳಿಗೆ ವರ್ಗಾಯಿಸಲಾಗಿರುತ್ತದೆ. ಈ ಪೈಕಿ 5622 ಗ್ರಂಥಾಲಯಗಳು ಮಾತ್ರ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಗೆ ಒಳಪಡಲಿದ್ದು, ಇದರ ಮೇಲ್ವಿಚಾರಕರುಗಳಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕ ಮಾಸಿಕ ಗೌರವಧನವನ್ನು ಬಿಡುಗಡೆ ಮಾಡಲಾಗುತ್ತಿರುತ್ತದೆ. ಅದರಂತೆ, ಗ್ರಂಥಾಲಯಗಳಲ್ಲಿನ ದಿನಪತ್ರಿಕೆಗಳು ಹಾಗೂ ನಿಯತಕಾಲಿಕೆಗಳ ನಿರ್ವಹಣೆಗಾಗಿ ತಗಲುವ ವೆಚ್ಚವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮೂಲಕವೇ ಭರಿಸಬೇಕಿರುತ್ತದೆ.

ಅದರಂತೆ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಗ್ರಂಥಾಲಯಗಳ ದಿನ ಪತ್ರಿಕೆ ಮತ್ತು ನಿಯತಕಾಲಿಕೆಗಳ ನಿರ್ವಹಣೆಗಾಗಿ, ಪ್ರತಿ ಗ್ರಂಥಾಲಯದ ವೆಚ್ಚಕ್ಕಾಗಿ ಮಾಸಿಕ ರೂ.400/- (ನಾಲ್ಕು ನೂರುಗಳು ಮಾತ್ರ)ಗಳನ್ನು ಗ್ರಾಮ ಪಂಚಾಯಿತಿಗಳಲ್ಲಿ ಸಂಗ್ರಹವಾಗುವ ಗ್ರಂಥಾಲಯದ ಕರದಿಂದ ಭರಿಸುವಂತೆ ಸೂಚಿಸಿದೆ.

5/10/2020
(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯಿತಿಗಳು.
2. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳು (ಆಯಾತಾಲ್ಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಈ ಆದೇಶದ ಪ್ರತಿಯನ್ನು ತಲುಪಿಸುವ ವ್ಯವಸ್ಥೆ ಮಾಡುವಂತೆ ಸೂಚಿಸಲಾಗಿದೆ.)
3. ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರು.
4. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಮಾಹಿತಿ ಕೇಂದ್ರ/ವೆಬ್‌ಸೈಟ್, ಗ್ರಾಅಪ ಇಲಾಖೆ.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.

2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,ಇವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಆಯುಕ್ತರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಮಾಹಿತಿಗಾಗಿ.
4. ನಿರ್ದೇಶಕರು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರಿಗೆ ಮಾಹಿತಿಗಾಗಿ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತಕ್ಕೆ.